ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

17

ಶಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 5/4/21

# ಯತ್ನಾಳ ಉಚ್ಚಾಟನೆಗೆ 65 ಶಾಸಕರಿಂದ ಸಹಿ

5/4/21

ದಾವಣಗೆರೆ: ಶಾಸಕ ಬಸನಗೌಡ ಪಾಟೀಲ ಯತ್ನಾಳ ದುರಂತ, ದುರಹಂಕಾರಿ ನಾಯಕ. ಅವರನ್ನು ಪಕ್ಷದಿಂದ ಉಚ್ಚಾಟಿಸಲು 65 ಶಾಸಕರು ಸಹಿ ಮಾಡಿದ್ದಾರೆಂದು ಸ್ಫೋಟಕ ಹೇಳಿಕೆ ನೀಡಿರುವ ಸಿಎಂ ರಾಜಕೀಯ ಕಾರ್ಯದರ್ಶಿ ಎಂ.ಪಿ.ರೇಣುಕಾಚಾರ್ಯ, ಯತ್ನಾಳ ಅವರನ್ನು ಪಕ್ಷಕ್ಕೆ ವಾಪಸ್ ಕರೆ ತಂದ ತಪ್ಪಿಗೆ ಯಡಿಯೂರಪ್ಪ ಅವರಿಗೆ ಒಳ್ಳೆಯ ಗಿಫ್ಟ್ ಕೊಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.



ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯತ್ನಾಳ ಪದೇಪದೆ ಸಿಎಂ ಸ್ಥಾನಕ್ಕೆ ಸವಾಲು ಹಾಕುತ್ತಾರೆ. ಪ್ರತಿ ತಿಂಗಳು ಒಂದೊಂದು ಡೇಟ್ ಕೊಡುತ್ತಾ ನಿತ್ಯ ಅರಿವೆ ಹಾವು ಬಿಡುತ್ತಾರೆ ಅಷ್ಟೆ. ಸಿಎಂ ಬದಲಾವಣೆ ಆಗುತ್ತೆ ಎಂದು ಹೇಳುತ್ತಿದ್ದಾರೆ. ಎಲ್ಲವೂ ಠುಸ್ ಆಗಲಿದೆ. ಕಾಂಗ್ರೆಸ್ ಏಜೆಂಟರಂತೆ ವರ್ತಿಸುವ ಅವರು ನಡವಳಿಕೆಯನ್ನು ಸರಿ ಮಾಡಿಕೊಳ್ಳಬೇಕು ಎಂದರು.

ಬಿ.ವೈ.ವಿಜಯೇಂದ್ರ ಪಕ್ಷದ ರಾಜ್ಯ ಉಪಾಧ್ಯಕ್ಷರು. ರಾಜ್ಯಾದ್ಯಂತ ಸುತ್ತಾಡಿ ಪಕ್ಷ ಸಂಘಟನೆ ಮಾಡುತ್ತಿದ್ದಾರೆ. ವಿನಾಕಾರಣ ಅವರ ಮೇಲೆ ಆರೋಪಿಸುವುದು ಸರಿಯಲ್ಲ. ಸಿಎಂ ಯಡಿಯೂರಪ್ಪ ಹಿರಿಯ ಸಚಿವ ಕೆ.ಎಸ್. ಈಶ್ವರಪ್ಪ ಅನಂತಕುಮಾರ ಆರಂಭ ಹಂತದಿಂದ ಪಕ್ಷ ಕಟ್ಟಿ ಬೆಳೆಸಿದ್ದಾರೆ. ಈಶ್ವರಪ್ಪ ಹಿರಿಯರು, ಅನುಭವಿಗಳು. ನಾಲ್ಕು ಗೋಡೆಗಳ ಮಧ್ಯೆ ಮಾತನಾಡಬೇಕಾದ ವಿಷಯವನ್ನು ರಾಜ್ಯಪಾಲರ ಬಳಿ ಒಯ್ದಿದ್ದು ಸರಿ ಅಲ್ಲ. ಅನಗತ್ಯವಾಗಿ ಕಾಂಗ್ರೆಸ್‌ನವರ ಕೈಗೆ ಅಸ್ತ್ರ ಕೊಟ್ಟಂತಾಗಿದೆ. ಉಪ ಚುನಾವಣೆ ಸಂದರ್ಭದಲ್ಲಿ ಇದು ಸಮಂಜಸ ಎನ್ನಿಸದು. ವಿಶೇಷ ಅನುದಾನ ನೀಡುವ ಪರಮಾಧಿಕಾರ ಸಿಎಂ ಅವರಿಗಿದೆ. ಅವರ ವಿವೇಚನೆಯಂತೆ ಬಳಸಿದ್ದಾರೆ. ಈ ವಿಷಯವನ್ನು ಚರ್ಚಿಸಿ ಪರಿಹರಿಸಿಕೊಳ್ಳಬಹುದು. ಈಶ್ವರಪ್ಪ ಯಡಿಯೂರಪ್ಪ ಮಧ್ಯೆ ಯಾವುದೇ ಮನಸ್ತಾಪವಿಲ್ಲ. ವರಿಷ್ಠರಿಗೂ ಈ ಬಗ್ಗೆ ಮಾಹಿತಿ ನೀಡಿದ್ದೇವೆ. ಎಲ್ಲವೂ ಸರಿ ಹೋಗಲಿದೆ ಎಂದರು.

## ಸಪ್ಲಾಯರ್‌ಗಳಿಂದ ಏನನ್ನೂ ಕಲಿಯಬೇಕಿಲ್ಲ: ಯತ್ನಾಳ

ವಿಜಯಪುರ: ಮಂತ್ರಿಯಾಗಲು, ಎಮ್ಮೆಲ್ಸಿ ಆಗಲು ಅಶ್ಲೀಲ ಸಿಡಿ ಇಟ್ಟುಕೊಂಡು ಬ್ಲ್ಯಾಕ್‌ಮೇಲ್ ಮಾಡುವವರಿಂದ ನಾನು ಕಲಿಯಬೇಕಾದುದು ಏನೂ ಇಲ್ಲ ಎಂದು ಶಾಸಕ ಬಸನಗೌಡ ಪಾಟೀಲ ಯತ್ನಾಳ ಮತ್ತೆ ಹರಿ ಹಾಯ್ದಿದ್ದಾರೆ. ಸುದ್ದಿಗಾರರ ಜತೆ ಮಾತನಾಡಿದ ಅವರು, ರಾಜಕೀಯ ಸ್ವಾರ್ಥಕ್ಕಾಗಿ ಬಾಗಲಕೋಟೆ ಜಿಲ್ಲೆಯ ಮಾಜಿ ಶಾಸಕ, ಸಚಿವರ ಅಶ್ಲೀಲ ಸಿಡಿ ಮಾಡಿದವರು ನಾಲಾಯಕ. ಮಂತ್ರಿ ಆಗಲು ನಾನು ಯಾರಿಗೂ ಹಣ ಕೊಟ್ಟಿಲ್ಲ, ಯಾರ ಕೈ ಕಾಲು ಹಿಡಿದಿಲ್ಲ, ಸಪ್ಲಾಯರ್ ಕೆಲಸ ಮಾಡಿಲ್ಲ, ಹೀಗಾಗಿ ಸಪ್ಲಾಯರ್‌ಗಳಿಂದ ನಾನು ಏನನ್ನೂ ಕಲಿಯಬೇಕಿಲ್ಲ ಎಂದರು.

